# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೊಂಭತ್ತನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ: 23ನೇ ಫೆಬ್ರವರಿ, 2023**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಎಂ. ನಾಗರಾಜು** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 46 (350)<br>4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪ್ರಕಾಶ್ ಕೆ. ರಾಥೋಡ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 54 (416)<br>4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಮೋಹನ ಕುಮಾರ್ ಕೊಂಡಜ್ಜಿ** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 60(441+442) | ಮಾನ್ಯ ಮುಖ್ಯಮಂತ್ರಿಗಳು |
| 1ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಪಿ.ಆರ್. ರಮೇಶ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 10 (86) | ಮಾನ್ಯ ಜೀವಿ ಪರಿಸ್ಥಿತಿ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

## 02. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು)** ಅವರು:–

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಕರ್ನಾಟಕ ಗ್ರಾಮೀಣ ಮೂಲಭೂತಸೌಕರ್ಯ ಅಭಿವೃದ್ಧಿ ನಿಯಮಿತ ಮೇಲಿನ ಮಾರ್ಚ್, 2021ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿಯನ್ನು (2022ನೇ ವರ್ಷದ ವರದಿ ಸಂಖ್ಯೆ–9) ಸಭೆಯ ಮುಂದಿಡುವುದು.

.2..

ಆ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯಕ್ಷಮತೆಯ ಮೇಲೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿಯನ್ನು (2022ನೇ ವರ್ಷದ ವರದಿ ಸಂಖ್ಯೆ-10) ಸಭೆಯ ಮುಂದಿಡುವುದು.

ಇ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಮಾರ್ಚ್, 2021ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಅನುಪಾಲನಾ ಲೆಕ್ಕಪರಿಶೋಧನಾ ವರದಿಯನ್ನು (2023ನೇ ವರ್ಷದ ವರದಿ ಸಂಖ್ಯೆ-1) ಸಭೆಯ ಮುಂದಿಡುವುದು.

## 03. ವರದಿಯನ್ನೊಪ್ಪಿಸುವುದು

**ಶ್ರೀ ಮಂಜುನಾಥ್ ಭಂಡಾರಿ (ಸದಸ್ಯರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2021-22 ಹಾಗೂ 2022-23ನೇ ಸಾಲಿನ 7ನೇ ವರದಿಯನ್ನೊಪ್ಪಿಸುವುದು.

## 04. ವಿತ್ತೀಯ ಕಾರ್ಯಕಲಾಪ

2023-24ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ

**(ಎರಡನೇ ದಿನ)**

## 05. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ನಿರಾಣಿ ಹಣಮಂತ ರುದ್ರಪ್ಪ** ಅವರು ಕೃಷ್ಣಾ ಮೇಲ್ದಂಡೆ ಯೋಜನೆಯಡಿಯಲ್ಲಿ ನಿರಾಶ್ರಿತರಿಗೆ ಪುನರ್ ವಸತಿ ಕಲ್ಪಿಸುವ ಕುರಿತು ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

02. **ಶ್ರೀ ಪಿ.ಆರ್. ರಮೇಶ್** ಅವರು ಬಿಬಿಎಂಪಿ ವ್ಯಾಪ್ತಿಯಲ್ಲಿನ ರಸ್ತೆ ಗುಂಡಿಗಳನ್ನು ಮುಚ್ಚುವ ಸಲುವಾಗಿ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

03. **ಶ್ರೀ ಸಿ.ಎನ್. ಮಂಜೇಗೌಡ** ಅವರು ಕಾರ್ಮಿಕ ವಿಮಾ ಆಸ್ಪತ್ರೆಗಳನ್ನು (ಇ.ಎಸ್.ಐ) ಸೊಸೈಟಿಯಾಗಿ ಪರಿವರ್ತಿಸಿ ಖಾಸಗೀಕರಣಗೊಳಿಸುವುದರ ಬದಲಾಗಿ ಆಸ್ಪತ್ರೆಗಳನ್ನು ಅತ್ಯಾಧುನಿಕ ವೈದ್ಯಕೀಯ ಉಪಕರಣದೊಂದಿಗೆ ಮೇಲ್ದರ್ಜೆಗೇರಿಸುವ ಕುರಿತು ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯುವುದು.

04. **ಶ್ರೀ ಕೆ. ಹರೀಶ್ ಕುಮಾರ್** ಅವರು ಕರಾವಳಿ ಜಿಲ್ಲೆಯ ಸುತ್ತಮುತ್ತಲಿನ ಪಂಚ ಜಿಲ್ಲೆಗಳಿಗೆ ಅನುಕೂಲವಾಗುವಂತೆ ಹೈಕೋರ್ಟ್ ವಿಭಾಗೀಯ ಪೀಠವನ್ನು ಸ್ಥಾಪಿಸಬೇಕೆನ್ನುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

.3..

05. **ಶ್ರೀ ಪುಟ್ಟಣ್ಣ** ಅವರು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿನ 15 ಜಿಲ್ಲಾ ಅಧಿಕಾರಿಗಳ(ಗ್ರೇಡ್-1) ಹುದ್ದೆಗಳಿಗೆ ಮುಂಬಡ್ತಿ ನೀಡುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

06. **ಶ್ರೀ ಯು.ಬಿ. ವೆಂಕಟೇಶ್** ಅವರು ಬೆಂಗಳೂರು ನಗರದ ಕತ್ರಗುಪ್ಪೆ ಗ್ರಾಮದ ಸರ್ವೆ ನಂ.15/1ರಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಿದ ನಿವೇಶನವನ್ನು ನಕಲಿ ದಾಖಲೆಗಳನ್ನು ಸೃಷ್ಠಿಸಿ ಅತಿಕ್ರಮಿಸಿಕೊಂಡಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

07. **ಶ್ರೀ ಎಸ್.ವ್ಹಿ. ಸಂಕನೂರ** ಅವರು ಕರ್ನಾಟಕ ವಿಶ್ವವಿದ್ಯಾಲಯ ಹಾಗೂ ಸಂಯೋಜಿತ ಕಾಲೇಜುಗಳಲ್ಲಿ 2011ರಿಂದ 2022ರವರೆಗೆ ಕಾರ್ಯನಿರ್ವಹಿಸಿ ನಿವೃತ್ತಿಯಾದ ಪ್ರಾಧ್ಯಾಪಕರು ಹಾಗೂ ಶಿಕ್ಷಕೇತರ ವರ್ಗಕ್ಕೆ ನಿವೃತ್ತಿ ಬಾಕಿ ಹಣ ಬಿಡುಗಡೆ ಮಾಡದಿರುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು

08. **ಶ್ರೀ ಅಡಗೂರ್ ಹೆಚ್. ವಿಶ್ವನಾಥ್** ಅವರು ಪದ್ಮಭೂಷಣ ಡಾ: ಎಂ.ಸಿ. ಮೋದಿ ಪಬ್ಲಿಕ್ ಟ್ರಸ್ಟ್‌ನಲ್ಲಿ 2014ರಿಂದ ಇಲ್ಲಿಯವರೆಗೆ ನಡೆಯುತ್ತಿರುವ ಅಕ್ರಮಗಳು ಹಾಗೂ ವಂಚನೆಗಳ ಕುರಿತು ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

09. **ಶ್ರೀ ಎಸ್. ರುದ್ರೇಗೌಡ ಹಾಗೂ ಶ್ರೀ ಆಯನೂರು ಮಂಜುನಾಥ್** ಅವರುಗಳು ಶಿವಮೊಗ್ಗ ಜಿಲ್ಲೆಯ ಸರ್ಕಾರಿ ಸ್ವಾಮ್ಯದಲ್ಲಿರುವ ಪ್ರತಿಷ್ಠಿತ "ದಿ ಮೈಸೂರು ಪೇಪರ್‌ಮಿಲ್ ಲಿ.,(ಎಂ.ಪಿ.ಎಂ.)" 2016ರಿಂದ ಸ್ಥಗಿತಗೊಂಡಿರುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು

## 06. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಬಿ.ಎಂ. ಫಾರೂಖ್, ಕೆ.ಎ. ತಿಪ್ಪೇಸ್ವಾಮಿ, ಶರವಣ ಟಿ.ಎ ಹಾಗೂ ಗೋವಿಂದ ರಾಜು** ಅವರುಗಳು ದಕ್ಷಿಣ ಕನ್ನಡ ಜಿಲ್ಲೆ ಮುಡಿಪು ಮತ್ತು ಇನ್ನಿತರೆ ಗ್ರಾಮಗಳಲ್ಲಿ ಕೆನರಾ ಕೈಗಾರಿಕಾ ಪ್ರದೇಶದ ವ್ಯಾಪ್ತಿಯಲ್ಲಿ ಕೈಗಾರಿಕಾ ಘಟಕಗಳ ಸ್ಥಾಪನೆಗೆ ರೈತರಿಂದ 700ಕ್ಕೂ ಹೆಚ್ಚು ಎಕರೆ ಭೂಮಿಯನ್ನು ಭೂಸ್ವಾಧೀನ ಮಾಡಿಕೊಂಡಿರುವ ಕುರಿತು ಪ್ರಸ್ತಾಪಿಸುವುದು.

02. **ಶ್ರೀ ಕೆ.ಎ. ತಿಪ್ಪೇಸ್ವಾಮಿ** ಅವರು ರಾಜ್ಯ ಸರ್ಕಾರದಿಂದ ಹಾಲು ಒಕ್ಕೂಟಗಳಿಗೆ ನೀಡಬೇಕಾಗಿರುವ ನೂರಾರು ಕೋಟಿ ಸಹಾಯಧನ ಬಿಡುಗಡೆ ಮಾಡದಿರುವುದರಿಂದ ರಾಜ್ಯದಲ್ಲಿ ಹಾಲು ಉತ್ಪಾದಕರು ಎದುರಿಸುತ್ತಿರುವ ಸಂಕಷ್ಟದ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು** ಅವರು ರಾಜ್ಯದಲ್ಲಿರುವ ಖಾಸಗಿ ಶಾಲೆಗಳಲ್ಲಿ ಕೇಂದ್ರ ಪಠ್ಯ ಕ್ರಮವನ್ನು ಭೋದಿಸಲು ಶಿಕ್ಷಣ ಇಲಾಖೆಯಿಂದ ಎನ್.ಓ.ಸಿ. ಪಡೆಯಲು ಸಾಧ್ಯವಾಗದೆ ಇರುವ ಶಾಲೆಗಳ ಆಡಳಿತ ಮಂಡಳಿಯವರು ಅಕ್ರಮವಾಗಿ ನಕಲಿ ಎನ್.ಓ.ಸಿ. ಪತ್ರಗಳನ್ನು ನೀಡುತ್ತಿರುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಮರಿತಿಬ್ಬೇಗೌಡ** ಅವರು ಪದವಿ ಮತ್ತು ವಿಶ್ವವಿದ್ಯಾನಿಲಯಗಳಲ್ಲಿ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರಿಗೆ ಸೇವಾ ಸವಲತ್ತು ಮತ್ತು ಭದ್ರತೆ ಒದಗಿಸುವ ಕುರಿತು ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**